**All India Radio: Bangalore**
**National Bulletin In Kannada**
**02.03.2026 1.10 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**02.03.2026 1.10 pm**

**<>><><*><><<>**

ಮುಖ್ಯಾಂಶಗಳು

**೧. ಕೆನಡಾ ಪ್ರಧಾನಿಯೊಂದಿಗೆ ಪ್ರಧಾನಿ ನರೇಂದ್ರ ಮೋದಿ ನಿಯೋಗ ಮಟ್ಟದ ಮಾತುಕತೆ**

**೨. ಇರಾನ್ ಮೇಲೆ ಮುಂದುವರಿದ ಇಸ್ರೇಲ್, ಅಮೆರಿಕ ದಾಳಿ; ಪಶ್ಚಿಮ ಏಷ್ಯಾದಲ್ಲಿ ತೀವ್ರಗೊಂಡ ಸಂಘರ್ಷ**

**೩. ಪಾಕಿಸ್ತಾನದ ಮಿಲಿಟರಿ ನೆಲೆಗಳ ಮೇಲೆ ಅಫ್ಘಾನಿಸ್ತಾನ ವಾಯುಪಡೆಯಿಂದ ದಾಳಿ**

**೪. ಹತ್ತೊಂಬತ್ತು ವಿದೇಶಿ ವಿಶ್ವವಿದ್ಯಾಲಯಗಳಿಂದ ಭಾರತದಲ್ಲಿ ಕ್ಯಾಂಪಸ್ ಸ್ಥಾಪನೆ**

**<>><><*><><<>**

ನವದೆಹಲಿಯ ಹೈದರಾಬಾದ್ ಹೌಸ್‌ನಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಮತ್ತು ಕೆನಡಾದ ಪ್ರಧಾನಿ ಮಾರ್ಕ್ ಕಾರ್ನಿ ಇಂದು ನಿಯೋಗ ಮಟ್ಟದ ಮಾತುಕತೆ ಪ್ರಗತಿಯಲ್ಲಿದೆ. ಭಾರತ-ಕೆನಡಾ ಕಾರ್ಯತಂತ್ರದ ಪಾಲುದಾರಿಕೆಯ ವಿವಿಧ ಕ್ಷೇತ್ರಗಳಲ್ಲಿ ಇಲ್ಲಿಯವರೆಗೆ ಸಾಧಿಸಿರುವ ಪ್ರಗತಿಯನ್ನು ಇಬ್ಬರೂ ನಾಯಕರು ಪರಿಶೀಲಿಸುತ್ತಿದ್ದಾರೆ. ವ್ಯಾಪಾರ ಮತ್ತು ಹೂಡಿಕೆ, ಇಂಧನ, ನಿರ್ಣಾಯಕ ಖನಿಜಗಳು, ಕೃಷಿ, ಶಿಕ್ಷಣ, ಸಂಶೋಧನೆ ಮತ್ತು ನಾವೀನ್ಯತೆ ಹಾಗೂ ಜನರಿಂದ ಜನರ ನಡುವಿನ ಸಂಬಂಧಗಳು ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ನಡೆಯುತ್ತಿರುವ ಸಹಕಾರವನ್ನು ಅವರು ಪರಿಶೀಲಿಸುತ್ತಿದ್ದಾರೆ. ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಕುರಿತು ಇಬ್ಬರು ನಾಯಕರು ತಮ್ಮ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ. ಪ್ರಧಾನಿ ಮೋದಿ ಮತ್ತು ಪ್ರಧಾನಿ ಕಾರ್ನಿ ಇಂದು ಮಧ್ಯಾಹ್ನ ಭಾರತ-ಕೆನಡಾ ಸಿಇಒಗಳ ಸಂವಾದದಲ್ಲಿ ಭಾಗವಹಿಸಲಿದ್ದಾರೆ. ಇದಕ್ಕೂ ಮುನ್ನ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ನವದೆಹಲಿಯಲ್ಲಿ ಇಂದು ಕೆನಡಾದ ಪ್ರಧಾನಿ ಮಾರ್ಕ್ ಕಾರ್ನಿ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಕಳೆದ ವರ್ಷ ಮಾರ್ಚ್‌ನಲ್ಲಿ ಅಧಿಕಾರ ವಹಿಸಿಕೊಂಡ ಪ್ರಧಾನಿ ಮಾರ್ಕ್ ಕಾರ್ನಿ ಭಾರತಕ್ಕೆ ತಮ್ಮ ಮೊದಲ ಪೂರ್ಣಪ್ರಮಾಣದ ದ್ವಿಪಕ್ಷೀಯ ಭೇಟಿಯಲ್ಲಿದ್ದಾರೆ.

**<>><><*><><<>**

ಇಸ್ರೇಲ್ ಮತ್ತು ಅಮೆರಿಕದ ಜಂಟಿ ಪಡೆಗಳು, ಇರಾನ್ ಮೇಲೆ ಕ್ಷಿಪಣಿ ಮತ್ತು ಡ್ರೋನ್ ದಾಳಿಗಳನ್ನು ನಡೆಸುತ್ತಿರುವುದರಿಂದ ಪಶ್ಚಿಮ ಏಷ್ಯಾದಲ್ಲಿ ಸಂಘರ್ಷ ತೀವ್ರಗೊಂಡಿದೆ. ಇದೇ ವೇಳೆ, ಇರಾನ್ ಪಡೆಗಳು ಇಸ್ರೇಲ್ ಮತ್ತು ಗಲ್ಫ್ ದೇಶಗಳ ಮೇಲೆ ಕ್ಷಿಪಣಿಗಳನ್ನು ಹಾರಿಸಿದರೆ, ಇಸ್ರೇಲ್ ಮತ್ತು ಅಮೆರಿಕ, ಇರಾನ್‌ನಲ್ಲಿನ ಗುರಿಗಳ ಮೇಲೆ ದಾಳಿ ಮಾಡಿವೆ. ಇರಾನ್‌ನ ದಾಳಿಯನ್ನು ಎದುರಿಸಲು ಅಮೆರಿಕದೊಂದಿಗೆ ಕೈಜೋಡಿಸಲು ಸಿದ್ಧ ಎಂದು ಬ್ರಿಟನ್, ಫ್ರಾನ್ಸ್ ಮತ್ತು ಜರ್ಮನಿ ಹೇಳಿವೆ. ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ, ಇರಾನ್‌ನ ಉನ್ನತ ಭದ್ರತಾ ಅಧಿಕಾರಿ ಅಲಿ ಲಾರಿಜಾನಿ, ಅಮೆರಿಕದೊಂದಿಗೆ ಇರಾನ್ ಮಾತುಕತೆ ನಡೆಸುವುದಿಲ್ಲ ಎಂದು ತಿಳಿಸಿದ್ದಾರೆ. ಇರಾನ್‌ನ ಸರ್ವೋಚ್ಚ ನಾಯಕ ಅಲಿ ಖಮೇನಿ ಅವರನ್ನು ಹತ್ಯೆ ಮಾಡಿದ ಇತ್ತೀಚಿನ ಅಮೆರಿಕದ ವಾಯುದಾಳಿಗಳನ್ನು ಇರಾನ್‌ನ ವಿದೇಶಾಂಗ ಸಚಿವ ಅಬ್ಬಾಸ್ ಅರಗ್ಚಿ ಬಲವಾಗಿ ಖಂಡಿಸಿದ್ದಾರೆ. ಇದಕ್ಕೆ ಪ್ರತಿಯಾಗಿ ಯುಎಇ, ಕುವೈತ್, ಬಹ್ರೇನ್ ಮತ್ತು ಇತರ ಗಲ್ಫ್ ದೇಶಗಳಲ್ಲಿನ ಅಮೆರಿಕದ ನೆಲೆಗಳ ಮೇಲೆ ದಾಳಿ ಮುಂದುವರಿಸಿದೆ. ಇದೇ ವೇಳೆ ಬೈರುತ್ ಮೇಲೆ ಇಸ್ರೇಲ್ ದಾಳಿ ನಡೆಸಿ ಪ್ರತೀಕಾರ ತೀರಿಸಿಕೊಂಡಿದೆ. ದಾಳಿಯಲ್ಲಿ ೩೧ ಜನರು ಪ್ರಾಣ ಕಳೆದುಕೊಂಡಿದ್ದಾರೆ. ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕೋರ್ ನ ಪ್ರಧಾನ ಕಚೇರಿಯ ಮೇಲೆ ದೊಡ್ಡ ಪ್ರಮಾಣದ ದಾಳಿ ನಡೆಸಿ ಧ್ವಂಸಗೊಳಿಸಿರುವುದಾಗಿ ಅಮೆರಿಕ ಸೇನೆ ದೃಢಪಡಿಸಿದೆ. ಅಮೆರಿಕ ಸೇನೆಯು ಇರಾನಿನ ೯ ನೌಕಾ ಹಡಗುಗಳನ್ನು ನಾಶಪಡಿಸಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಇರಾನ್‌ನ ಉಳಿದ ನೌಕಾ ಹಡಗುಗಳನ್ನು ಅಮೆರಿಕ ಬೆನ್ನಟ್ಟುತ್ತಿದೆ ಮತ್ತು ಅವು ಶೀಘ್ರದಲ್ಲೇ ಧ್ವಂಸವಾಗಲಿದೆ ಎಂದು ಟ್ರಂಪ್ ಎಚ್ಚರಿಸಿದ್ದಾರೆ. ಐಆರ್‌ಜಿಸಿ, ಗುಪ್ತಚರ ಪ್ರಧಾನ ಕಚೇರಿ, ಐಆರ್‌ಜಿಸಿ ವಾಯುಪಡೆಯ ಕಮಾಂಡ್ ಕೇಂದ್ರಗಳು ಮತ್ತು ಆಂತರಿಕ ಭದ್ರತಾ ಪ್ರಧಾನ ಕಚೇರಿ ಸೇರಿದಂತೆ ಇರಾನಿನ ಹಲವು ಮಿಲಿಟರಿ ಕಮಾಂಡ್ ಕೇಂದ್ರಗಳ ಮೇಲೆ ದಾಳಿ ನಡೆಸಿರುವುದಾಗಿ ಇಸ್ರೇಲ್ ಸೇನೆ ತಿಳಿಸಿದೆ. ಈ ದಾಳಿಗಳು ಇರಾನ್‌ನ ಕಮಾಂಡ್-ಅಂಡ್-ಕಂಟ್ರೋಲ್ ಸಾಮರ್ಥ್ಯಗಳಿಗೆ ತೀವ್ರ ಹೊಡೆತ ನೀಡಿವೆ. ಇದರ ಪರಿಣಾಮವಾಗಿ ಇರಾನ್‌ನ ಅನೇಕ ಯೋಧರು ಮೃತಪಟ್ಟಿದ್ದಾರೆ ಎಂದು ಇಸ್ರೇಲ್ ಸೇನೆ ಮಾಹಿತಿ ನೀಡಿದೆ. ಇದಕ್ಕೆ ಪ್ರತಿಯಾಗಿ ಇಸ್ರೇಲ್, ಗಲ್ಫ್ ಪ್ರದೇಶದಲ್ಲಿನ ಅಮೆರಿಕ ಮಿಲಿಟರಿ ನೆಲೆಗಳು, ಸೌದಿ ರಾಜಧಾನಿ ರಿಯಾದ್ ಮತ್ತು ದುಬೈ ಮೇಲೆ ಕ್ಷಿಪಣಿಗಳು ಮತ್ತು ಡ್ರೋನ್‌ಗಳಿಂದ ಇರಾನ್ ದಾಳಿ ನಡೆಸಿದೆ.

**<><><*><><<>**

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಪರಿಸ್ಥಿತಿಯ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರೊಂದಿಗೆ ದೂರವಾಣಿ ಮೂಲಕ ಚರ್ಚೆ ನಡೆಸಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ, ಇತ್ತೀಚಿನ

ಬೆಳವಣಿಗೆಗಳ ಬಗ್ಗೆ ಭಾರತದ ಕಳವಳ ಹಾಗೂ ನಾಗರಿಕರ ಸುರಕ್ಷತೆಯನ್ನು ಆದ್ಯತೆಯಾಗಿ ಇರಿಸುವ ಕುರಿತು ತಿಳಿಸಲಾಗಿದೆ. ಯುದ್ಧವನ್ನು ಶೀಘ್ರ ನಿಲ್ಲಿಸುವ ಅಗತ್ಯವನ್ನು ಭಾರತ ಪುನರುಚ್ಚರಿಸುತ್ತದೆ ಎಂದು ಹೇಳಿದ್ದಾರೆ. ಇದೇ ವೇಳೆ ಪ್ರಧಾನಿ ಮೋದಿಯವರು, ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರೊಂದಿಗೆ ದೂರವಾಣಿ ಮೂಲಕ ಮಾತುಕತೆ ನಡೆಸಿದರು. ಯುಎಇ ಮೇಲಿನ ದಾಳಿಯನ್ನು ಭಾರತ ಖಂಡಿಸುತ್ತದೆ. ಈ ಕಷ್ಟದ ಸಮಯದಲ್ಲಿ ಯುಎಇ ಯೊಂದಿಗೆ ಭಾರತ ಒಗ್ಗಟ್ಟಾಗಿ ನಿಲ್ಲುತ್ತದೆ ಎಂದು ಹೇಳಿದ ಪ್ರಧಾನಿ, ದಾಳಿಯಲ್ಲಿ ಆದ ಜೀವ ಹಾನಿಗೆ ಸಂತಾಪ ಸೂಚಿಸಿದರು.

**<><><*><><>**

ಪಶ್ಚಿಮ ಏಷ್ಯಾದಲ್ಲಿ ಉಂಟಾಗಿರುವ ಭದ್ರತಾ ಬಿಕ್ಕಟ್ಟಿನ ಕಾರಣ ಭಾರತದಲ್ಲಿರುವ ವಿದೇಶಿ ಪ್ರಜೆಗಳು ವೀಸಾ ವಿಸ್ತರಣೆ ಅಥವಾ ವಾಸ್ತವ್ಯವನ್ನು ಕ್ರಮಬದ್ಧಗೊಳಿಸಲು ಸಹಾಯಕ್ಕಾಗಿ ಸಮೀಪದ ವಿದೇಶೀಯರ ಪ್ರಾದೇಶಿಕ ನೋಂದಾಣಿ ಕಚೇರಿ ಸಂಪರ್ಕಿಸುವಂತೆ ವಿದೇಶಾಂಗ ಸಚಿವಾಲಯ ಸಲಹೆ ನೀಡಿದೆ. ಪಶ್ಚಿಮ ಏಷ್ಯಾದಲ್ಲಿರುವ ಭಾರತೀಯರಿಗಾಗಿ ವಿದೇಶಾಂಗ ಸಚಿವಾಲಯ ಪ್ರತ್ಯೇಕ ಪ್ರಯಾಣ ಮತ್ತು ಸುರಕ್ಷತಾ ಸಲಹೆಗಳನ್ನು ನೀಡಿದೆ. ಇದೇ ವೇಳೆ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ಸೌದಿ ಅರೇಬಿಯಾ ಮತ್ತು ಕುವೈತ್‌ನ ವಿದೇಶಾಂಗ ಸಚಿವರೊಂದಿಗೆ ಮಾತುಕತೆ ನಡೆಸಿದ್ದಾರೆ. ಪ್ರಾದೇಶಿಕ ಸ್ಥಿರತೆಯ ಬಗ್ಗೆ ಭಾರತದ ಕಳವಳ ವ್ಯಕ್ತಪಡಿಸಿರುವ ಅವರು, ಬಿಕ್ಕಟ್ಟಿನ ಪರಿಸ್ಥಿತಿ ಕುರಿತು ಚರ್ಚಿಸಿದ್ದಾರೆ.

**<><><*><><>**

ಪಶ್ಚಿಮ ಏಷ್ಯಾದ ಪ್ರಸ್ತುತ ಪರಿಸ್ಥಿತಿಯನ್ನು ಗಮನದಲ್ಲಟ್ಟುಕೊಂಡು ಯುಎಇ, ಸೌದಿ-ಅರೇಬಿಯಾ, ಇಸ್ರೇಲ್ ಮತ್ತು ಕತಾರ್‌ಗೆ ತೆರಳುವ ಹಾಗೂ ಅಲ್ಲಿಂದ ಹೊರಡುವ ಎಲ್ಲಾ ವಿಮಾನಗಳನ್ನು ಇಂದು ಮಧ್ಯ ರಾತ್ರಿಯವರೆಗೆ ಏರ್ ಇಂಡಿಯಾ ರದ್ದುಪಡಿಸಿದೆ. ಇದೇ ವೇಳೆ ಯೂರೋಪ್‌ಗೆ ನಿಗದಿಯಾಗಿದ್ದ ಕೆಲವು ಆಯ್ದ ವಿಮಾನಗಳನ್ನು ಸಹ ಏರ್ ಇಂಡಿಯಾ ರದ್ದುಪಡಿಸಿದೆ. ಅಮೃತಸರದಿಂದ ಬರ್ಮಿಂಗ್‌ಹ್ಯಾಮ್, ದೆಹಲಿಯಿಂದ ಜ್ಯೂರಿಚ್, ದೆಹಲಿಯಿಂದ ಕೋಪನ್‌ಹೇಗನ್ ಹಾಗೂ ಬರ್ಮಿಂಗ್‌ಹ್ಯಾಂನಿಂದ ದೆಹಲಿಗೆ ತೆರಳುವ ವಿಮಾನಗಳು ಇದರಲ್ಲಿ ಸೇರಿವೆ. ಪರಿಸ್ಥಿತಿಯನ್ನು ನಿರಂತರವಾಗಿ ಮೇಲ್ವಿಚಾರಣೆ ನಡೆಸಲಾಗುತ್ತಿದೆ. ಸುರಕ್ಷತೆ, ಭದ್ರತೆ, ವಾಯುಪ್ರದೇಶದ ಲಭ್ಯತೆ ಮತ್ತು ಕಾರ್ಯಾಚರಣೆಯ ಕಾರ್ಯಸಾಧ್ಯತೆ ಸೇರಿದಂತೆ ವಿವಿಧ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಸೂಕ್ತ ಸಮಯದಲ್ಲಿ ಸೂಕ್ತ ನಿರ್ಧಾರಗಳನ್ನು ತೆಗೆದುಕೊಳ್ಳಲಾಗುತ್ತದೆ. ಈ ಕುರಿತು ಪ್ರಯಾಣಿಕರಿಗೆ ಮಾಹಿತಿ ಒದಗಿಸಲಾಗುತ್ತದೆ ಎಂದು ಏರ್ ಇಂಡಿಯಾ ತಿಳಿಸಿದೆ.

**<><><*><><>**

ಪಾಕಿಸ್ತಾನದ ವಿವಿಧ ಮಿಲಿಟರಿ ನೆಲೆಗಳ ಮೇಲೆ ಅಫ್ಘಾನಿಸ್ತಾನ ವಾಯುಪಡೆ ನಿಖರ ಮತ್ತು ಸಂಘಟಿತ ವೈಮಾನಿಕ ದಾಳಿ ನಡೆಸಿದೆ ಎಂದು ಅಫ್ಘಾನಿಸ್ತಾನ ರಕ್ಷಣಾ ಸಚಿವಾಲಯ ತಿಳಿಸಿದೆ. ರಾವಲ್‌ಪಿಂಡಿಯಲ್ಲಿರುವ ನೂರ್‌ಖಾನ್ ವಾಯುನೆಲೆ, ಕ್ವೆಟ್ಟಾದಲ್ಲಿರುವ ಪ್ರಧಾನ ಕಚೇರಿ ಮತ್ತು ಖೈಬರ್ ಪಖ್ತುಂಖ್ವಾದ ಖ್ವಾಜೈ ಶಿಬಿರ ಸೇರಿದಂತೆ ಪ್ರಮುಖ ಪಾಕಿಸ್ತಾನಿ ಮಿಲಿಟರಿ ಸೌಲಭ್ಯಗಳ ಮೇಲೆ ದಾಳಿ ನಡೆಸಲಾಗಿದೆ. ಕಾರ್ಯಾಚರಣೆ ಸಂದರ್ಭದಲ್ಲಿ ಪಾಕಿಸ್ತಾನದಾದ್ಯಂತ ಇತರೆ ಹಲವು ಕಮಾಂಡ್ ಕೇಂದ್ರಗಳನ್ನು ಗುರಿಯಾಗಿಸಿ ದಾಳಿ ನಡೆಸಲಾಗಿದೆ ಎಂದು ಅಫ್ಘಾನಿಸ್ತಾನ ಮಾಹಿತಿ ನೀಡಿದೆ.

**<>><><*><><<>**

ಪ್ರಸಕ್ತ ಶೈಕ್ಷಣಿಕ ವರ್ಷದೊಳಗೆ ಸುಮಾರು ೧೯ ವಿದೇಶಿ ವಿಶ್ವವಿದ್ಯಾಲಯಗಳು ಭಾರತದಲ್ಲಿ ತಮ್ಮ ಕ್ಯಾಂಪಸ್‌ಗಳನ್ನು ಸ್ಥಾಪಿಸಲಿವೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ನಡೆದ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಅವರು, ಭಾರತೀಯ ಸಂಸ್ಥೆಗಳು, ಅರೆವಾಹಕಗಳು, ಕೃತಕಬುದ್ಧಿಮತ್ತೆ, ಬಯೋಟೆಕ್ ನಿರ್ಣಾಯಕ ಖನಿಜಗಳು, ಕೃಷಿ ಮತ್ತು ಸುಸ್ಥಿರ ನಿರ್ವಹಣೆಯಂತಹ ಕ್ಷೇತ್ರಗಳಲ್ಲಿ ಜಾಗತಿಕ ಸಂಸ್ಥೆಗಳಲ್ಲಿ ಸಹಕರಿಸುತ್ತಿವೆ ಎಂದು ಹೇಳಿದರು. ಗುಣಮಟ್ಟದ ಶಿಕ್ಷಣದ ಮೇಲೆ ಭಾರತ ಕೇಂದ್ರೀಕರಿಸುತ್ತಿದೆ. ಶ್ರೇಯಾಂಕ ವ್ಯವಸ್ಥೆಯಲ್ಲಿ ತನ್ನ ಸ್ಥಾನವನ್ನು ಸುಧಾರಿಸುತ್ತಿದೆ. ಯುವಕರಿಗೆ ಹೆಚ್ಚಿನ ಆರ್ಥಿಕ ಅವಕಾಶಗಳನ್ನು ಸೃಷ್ಟಿಸುತ್ತಿದೆ ಎಂದು ಸಚಿವ ಧರ್ಮೇಂದ್ರ ಪ್ರಧಾನ್ ತಿಳಿಸಿದರು. ಇದೇ ವೇಳೆ ಭಾರತದಲ್ಲಿ ಅಧ್ಯಯನ ನಡೆಸುವಂತೆ ವಿದೇಶಿ ವಿದ್ಯಾರ್ಥಿಗಳನ್ನು ಸಚಿವರು ಆಹ್ವಾನಿಸಿದರು.

**<>><><*><><<>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಆತ್ಮವಿಶ್ವಾಸ ಮತ್ತು ಇಚ್ಛಾಶಕ್ತಿಯ ಮಹತ್ವವನ್ನು ಸಾರುವ ಸಂಸ್ಕೃತ ಸುಭಾಷಿತವೊಂದನ್ನು ಹಂಚಿಕೊಂಡಿದ್ದಾರೆ. ಭಾರತದ ಯುವಶಕ್ತಿಯ ದೃಢಸಂಕಲ್ಪವು ಅಪ್ರತಿಮವಾದುದು. ದೇಶದ ಯುವ ಮಿತ್ರರು ತಾವು ಸಂಕಲ್ಪಿಸಿದ ಯಾವುದನ್ನೇ ಆದರೂ ಸಾಧಿಸಿ ತೋರಿಸುತ್ತಾರೆ. ಇದೇ ಕಾರಣದಿಂದಾಗಿ ದೇಶವು ಇಂದು ತನ್ನ ಕನಸುಗಳನ್ನು ನನಸು ಮಾಡಿಕೊಳ್ಳುತ್ತಿದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

**<>><><*><><<>**

ಕರ್ನಾಟಕದ ಕಲಬುರಗಿಯ ಚಂದ್ರಶೇಖರ್ ಪಾಟೀಲ್ ಕ್ರೀಡಾಂಗಣದಲ್ಲಿ ವನಿತಾ ವಿಭಾಗದ ಇಂಟರ್‌ನ್ಯಾಷನಲ್ ಟೆನಿಸ್ ಫೆಡರೇಷನ್ - ಐಟಿಎಫ್ ಟೆನಿಸ್ ಪಂದ್ಯಾವಳಿಯ ಮುಖ್ಯ ಸುತ್ತಿನ ಸ್ಪರ್ಧೆಗಳು ಇಂದಿನಿಂದ ಇದೇ ೮ರವರೆಗೆ ನಡೆಯಲಿದೆ. ನಿನ್ನೆ ನಡೆದ ಅರ್ಹತಾ ಸುತ್ತಿನಲ್ಲಿ ೧೨

ಭಾರತೀಯರು ಎರಡನೇ ಮತ್ತು ಅಂತಿಮ ಸುತ್ತಿಗೆ ಮುನ್ನಡೆ ಪಡೆದರು. ಅರ್ಹತಾ ಸುತ್ತಿನಲ್ಲಿ ವಂಶಿತಾ ಪಠಾನಿಯಾ ೬-೩, ೬-೧ ಸೆಟ್‌ಗಳಿಂದ ಅರುಣ್ ಅವರನ್ನು ಮಣಿಸಿದರೆ, ಮರಿಯಾ ಮಿಖೈಲೋವಾ ೬-೨, ೬-೧ ಸೆಟ್‌ಗಳಿಂದ ಚಂದನಾ ಪೊಟುಗಾರಿ ಅವರನ್ನು ಸೋಲಿಸಿದರು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>**